ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಕಟ್ಟಡವನ್ನು ಆಧುನೀಕರಣಗೊಳಿಸುವುದು.

298(2468)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್(ಹುಬ್ಬಳ್ಳಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಕಟ್ಟಡವನ್ನು ಆಧುನೀಕರಣಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಆ) ಈ ಮಹಾನಗರ ಪಾಲಿಕೆಯ ಆಧುನೀಕರಣ ಹಾಗೂ ನಾಗರೀಕ ಸೌಲಭ್ಯ ಒದಗಿಸಲು ವಿಶೇಷ ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಲಾಗಿದೆಯೇ?

ಇ) ಸರ್ಕಾರ ಬಿಡುಗಡೆ ಮಾಡಿದ ವಿಶೇಷ ಅನುದಾನದ ಮೊತ್ತ ಎಷ್ಟು?

ಈ) ಹಾಗಿಲ್ಲದಿದ್ದಲ್ಲಿ ಬಿಡುಗಡೆಯಾಗದಿರಲು ಕಾರಣವೇನು?

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು):

ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಯಾವುದೇ ಕಟ್ಟಡವನ್ನು ಆಧುನೀಕರಣಗೊಳಿಸುವ ಕ್ರಮ ಕೈಗೊಂಡಿರುವುದಿಲ್ಲ.

ಆ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಕಟ್ಟಡವನ್ನು ಆಧುನೀಕರಣಗೊಳಿಸಲು ಹಾಗೂ ನಾಗರೀಕ ಸೌಲಭ್ಯ ಒದಗಿಸಲು ಸರ್ಕಾರವು ಯಾವುದೇ ವಿಶೇಷ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್: ಮಾನ್ಯ ಅಧ್ಯಕ್ಷರೆ, ಕರ್ನಾಟಕದಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಎರಡನೇ ಮಹಾನಗರಪಾಲಿಕೆಯಾಗಿದ್ದು, ಇಲ್ಲಿ ಯಾವುದೇ ತರಹದ ಉದ್ಯಾನವನವಾಗಲಿ, ಪಾದಚಾರಿ ರಸ್ತೆಯಾಗಲಿ, ಪ್ರಾಣಿಸಂಗ್ರಹಾಲಯವಾಗಲಿ, ಮ್ಯೂಸಿಯಂ ಆಗಲೀ, ಇಂಥ ಯಾವುದೇ ಸೌಲಭ್ಯ ಇಲ್ಲಿ ಇಲ್ಲ. ಈ ಮಹಾನಗರಪಾಲಿಕೆಗೆ ಇಲ್ಲಿಯವರೆಗೆ ಸರ್ಕಾರ ವಿಶೇಷ ಅನುದಾನವನ್ನು ಬಿಡುಗಡೆ ಮಾಡಿಲ್ಲ?

ಶ್ರೀ ಬಿ.ಬಿ.ಚಿಮ್ಮನಕಟ್ಟಿ: ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಅಂತ ಯೋಜನೆಗಳು ಸರ್ಕಾರದ ಮುಂದೆ ಇದೆಯೇ ಎಂದು ಕೇಳಿದ್ದಾರೆ, ಅಂಥ ಪ್ರಸ್ತಾವನೆಗಳು ಹಾಗೂ ಮಂಜೂರಾತಿಗಾಗಿ ಸರ್ಕಾರದ ಮುಂದೆ ಇಲ್ಲ, ತಮಗೆ ಏನು ಯೋಜನೆ ಬೇಕು ಎಂದು ಕೇಳುತ್ತೀರಿ, ಮಹಾನಗರ ಪಾಲಿಕೆಗೆ ತಿಳಿಸಿ ಆ ಯೋಜನೆಯನ್ನು ನಾವು ಕಾರ್ಯಗತಗೊಳಿಸುವುದಕ್ಕೆ ಪ್ರಯತ್ನಿಸುತ್ತೇವೆ.

ಬೆಂಗಳೂರು ನಗರವನ್ನು ಸಿಂಗಾಪುರ ಮಾದರಿ ನಗರವನ್ನಾಗಿ ಪರಿವರ್ತಿಸುವ ವಿಚಾರ.

340(3463)

ಶ್ರೀ ಶ್ರೀನಿವಾಸಗೌಡ ಕುದುವನಹಳ್ಳಿ.ಕೆ. (ಕೋಲಾರ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರವನ್ನು ಸಿಂಗಾಪುರ ಮಾದರಿಯಲ್ಲಿ ಪರಿವರ್ತಿಸಲು ಇಲ್ಲಿಯವರೆಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಹಣವೆಷ್ಟು?

ಆ) ಬೆಂಗಳೂರು ನಗರವನ್ನು ಸೌಂದರ್ಯಗೊಳಿಸಲು ಕೇಂದ್ರ ಸರ್ಕಾರದಿಂದ ಎಷ್ಟು ಹಣ ಬಿಡುಗಡೆಯಾಗಿದೆ?

ಇ) ಬೆಂಗಳೂರು ನಗರವನ್ನು ಸಿಂಗಾಪೂರ್ ಮಾದರಿಯಲ್ಲಿ ಪರಿವರ್ತನೆಗೊಳಿಸಲು ಯಾವ ಯಾವ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ?

ಈ) ಇನ್ನು ಎಷ್ಟು ವರ್ಷಗಳಲ್ಲಿ ಬೆಂಗಳೂರು ನಗರ ಸಿಂಗಾಪುರ್ ಮಾದರಿಯಲ್ಲಿ ಪರಿವರ್ತನೆಯಾಗುತ್ತದೆ?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು):

ಅ) ಬೆಂಗಳೂರು ನಗರವನ್ನು ಸಿಂಗಾಪುರ್ ಆಗಿ ಬದಲಾಯಿಸುವ ಉದ್ದೇಶ ಸರ್ಕಾರಕ್ಕಿಲ್ಲ. ಆದರೆ, ಸಾರ್ವಜನಿಕರಿಗೆ ಬೆಂಗಳೂರು ನಗರವನ್ನು ಸಿಂಗಾಪುರ್‌ನ್ನು ಮಾದರಿಯಾಗಿಟ್ಟುಕೊಂಡು ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಮಾಡುವ ಹಾಗೂ ಬೆಂಗಳೂರು ನಗರವನ್ನು ನವೀನ ಮತ್ತು ಸ್ವಚ್ಛ ನಗರವನ್ನಾಗಿ ಮಾರ್ಪಡಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ ಎಂದು ತಿಳಿಸುವ ಉದ್ದೇಶ ಸರ್ಕಾರಕ್ಕಿದೆ.

ಸರ್ಕಾರವು ಬೆಂಗಳೂರು ನಗರದ ಅಭಿವೃದ್ಧಿಗಾಗಿ ಈ ಕೆಳಕಂಡಂತೆ ಹಣ ಬಿಡುಗಡೆ ಮಾಡಿರುತ್ತದೆ.